ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/05/ಇಸಿಎಸ್(1)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-560001
ದೂರವಾಣಿ ಸಂಖ್ಯೆ: 080-22200777
ದಿನಾಂಕ:11.07.2024

<u>ಸುತ್ತೋಲೆ</u>

ವಿಷಯ: ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಕಾರ್ಯ ನಿರ್ವಹಿಸುವ ಬಾಹ್ಯ ಉಪನ್ಯಾಸಕರ ಹಾಜರಾತಿ ಪತ್ರ ನೀಡಿಕೆ ಕುರಿತು.

************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಗಳಲ್ಲಿ ಪರೀಕ್ಷಾ ಮುಖ್ಯ ಅಧೀಕ್ಷಕರು, ಉಪ ಮುಖ್ಯ ಅಧೀಕ್ಷಕರು, ಮುಖ್ಯ ವೀಕ್ಷಕರು, ಆಂತರಿಕ ಅಂಕಗಳ ಪರಿವೀಕ್ಷಕರು, ಪ್ರಾಯೋಗಿಕ ಪರೀಕ್ಷೆಯ ಬಾಹ್ಯ ಪರೀಕ್ಷಕರು ಮುಂತಾದ ಪರೀಕ್ಷಾ ಕಾರ್ಯ ನಿರ್ವಹಿಸುವ ಉಪನ್ಯಾಸಕರುಗಳಿಗೆ ಸಂಬಂಧಿಸಿದ ಪರೀಕ್ಷಾ ಕೇಂದ್ರ/ಸಂಸ್ಥೆಗಳ ಪ್ರಾಂಶುಪಾಲರು, ಪರೀಕ್ಷಾ ಅವಧಿಯ ದಿನಗಳಿಗೆ ಮಾತ್ರ "ಹಾಜರಾತಿ ಪ್ರಮಾಣ ಪತ್ರ" ವನ್ನು ನೀಡುವಂತೆ ಸೂಚಿಸಲಾಗಿದೆ.

ಥಿಯರಿ ಪರೀಕ್ಷಾ ವೇಳಾಪಟ್ಟಿಯನ್ವಯ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆದ ದಿನಾಂಕಗಳನ್ನು/ ಪ್ರಾಯೋಗಿ ಪರೀಕ್ಷೆಗಳು ನಡೆದ ಬಗ್ಗೆ Conduction Certificate ಗಳನ್ನು ಹಾಜರಾತಿ ಪ್ರಮಾಣ ಪತ್ರದಲ್ಲಿ ಉಲ್ಲೇಖಿಸಲು ಸೂಚಿಸಲಾಗಿದೆ. ಪರೀಕ್ಷಾ ಅವಧಿಯನ್ನು ಹೊರತು ಪಡಿಸಿ ಹಾಜರಾತಿ ಪತ್ರ ನೀಡಿದ್ದಲ್ಲಿ ಸಂಬಂಧಿಸಿದ ಪ್ರಿನ್ಸಿಪಾಲರ ಮೇಲೆ ಸೂಕ್ತ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ತಿಳಿಸಲಾಗಿದೆ.

ಹಾಜರಾತಿ ಪ್ರಮಾಣ ಪತ್ರವನ್ನು ಪಡೆದಂತಹ ಉಪನ್ಯಾಸಕರುಗಳು ಕೂಡಲೇ ತಮ್ಮ ತಮ್ಮ ಸಂಸ್ಥೆಗಳಲ್ಲಿ ಕಾರ್ಯವರದಿ ಮಾಡಿಕೊಳ್ಳಲು ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು- ಅಗತ್ಯ ಕ್ರಮಕ್ಕಾಗಿ.

ಪ್ರತಿ,
1) ನಿರ್ದೇಶಕರ ಆಪ್ತಶಾಖೆ
2) ಕಾರ್ಯದರ್ಶಿಯವರ ಆಪ್ತ ಶಾಖೆ
3) ಇ – ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್ ನಲ್ಲಿ ಪ್ರಕಟಿಸಲು
4) ಗಣಕ ಕೇಂದ್ರಕ್ಕೆ – ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು